## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2013-14ನೇ ಸಾಲಿನ ಎಂ.ಎಸ್.ಡಿ.ಪಿ. (ಬಹುವಲಯವಾರು) ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತರ ನೂತನ ಮೆಟ್ರಿಕ್ ನಂತರದ ಹಾಗೂ ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸುವ ಬಗ್ಗೆ.

**ಓದಲಾಗಿದೆ:** 1) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಅಸಂನಿ/ವಿನಿಕ/ಸಿಆರ್-65/2011-12, ದಿನಾಂಕ: 08.02.2013

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಬೀದರ್, ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಈಗಾಗಲೇ ಬಹುವಲಯವಾರು ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತರ ಬಾಲಕ/ಬಾಲಕಿಯರಿಗೆ ವಸತಿ ನಿಲಯಗಳ ಕಟ್ಟಡಗಳನ್ನು ಕಟ್ಟಲು ಕ್ರಮ ವಹಿಸಲಾಗುತ್ತಿದ್ದು, ಈ ಸ್ಥಳಗಳಲ್ಲಿ ಒಟ್ಟು 36 ಅಲ್ಪಸಂಖ್ಯಾತರ ಬಾಲಕ/ಬಾಲಕಿಯರ ವಸತಿ ನಿಲಯಗಳನ್ನು ಪ್ರಾರಂಭಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 124 ವಿದ್ಯಾರ್ಥಿ ನಿಲಯಗಳಿದ್ದು, ಡಾ|| ನಂಜುಂಡಪ್ಪ ವರದಿಯಲ್ಲಿ ಗುರುತಿಸಲಾಗಿರುವ 15 ಹಿಂದುಳಿದ ತಾಲ್ಲೂಕುಗಳಲ್ಲಿ 22 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡದಲ್ಲಿ ನಡೆಯುತ್ತಿದ್ದು, 34 ಹಿಂದುಳಿದ ತಾಲ್ಲೂಕುಗಳಲ್ಲಿ 43 ನೂತನ ಕಟ್ಟಡ ನಿರ್ಮಿಸಲು ಅನುದಾನ ಬಿಡುಗಡೆ ಮಾಡಲಾಗಿದೆ. 65 ಹಿಂದುಳಿದ ತಾಲ್ಲೂಕುಗಳಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳು ಇರುವುದಿಲ್ಲ. ಆದುದರಿಂದ 2013-14ನೇ ಸಾಲಿನಲ್ಲಿ ಆಯವ್ಯಯವನ್ನು ಒದಗಿಸಲಾಗಿದ್ದು, ಇದನ್ನು ಸಂಪೂರ್ಣವಾಗಿ ಖರ್ಚು ಮಾಡಬೇಕಾಗುತ್ತದೆ. 2013-14ನೇ ಸಾಲಿನಲ್ಲಿ ನೂತನ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಲೆಕ್ಕಶೀರ್ಷಿಕೆ 2225-03-277-2-64ರಡಿಯಲ್ಲಿ ರೂ. 530.34ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 247 MDC 2012, ಬೆಂಗಳೂರು, ದಿನಾಂಕ: 30.09.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಗುಲ್ಬರ್ಗಾ, ಬೀದರ್ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ 2013-14ನೇ ಸಾಲಿನಿಂದ ಈ ಆದೇಶದ ಅನುಬಂಧದಲ್ಲಿ ಲಗತ್ತಿಸಿರುವ ಒಟ್ಟು 36 ಅಲ್ಪಸಂಖ್ಯಾತರ ಬಾಲಕ/ಬಾಲಕಿಯರ, ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳನ್ನು ಹೊಸದಾಗಿ ಪ್ರಾರಂಭಿಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಇದಕ್ಕೆ ತಗಲುವ ವೆಚ್ಚವನ್ನು 2013-14ನೇ ಸಾಲಿನ ಲೆಕ್ಕಶೀರ್ಷಿಕೆ 2225-03-277-2-64ರಲ್ಲಿ ಒದಗಿಸಲಾದ 530.34ಲಕ್ಷಗಳಲ್ಲಿ ಭರಿಸತಕ್ಕದು.